**All India Radio: Bangalore**
**National Bulletin In Kannada**
**14.02.2025 07.35 a.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**14.02.2025 07.35 a.m.**
*********************

ಮುಖ್ಯಾಂಶಗಳು

೧. ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಕರ್ನಾಟಕಕ್ಕೆ ಭೇಟಿ; ಬೆಂಗಳೂರಿನಲ್ಲಿ ಅಂತಾರಾಷ್ಟ್ರೀಯ ಮಹಿಳಾ ಸಮ್ಮೇಳನದಲ್ಲಿ ಭಾಗಿ

೨. ವಾಷಿಂಗ್ಟನ್ ಡಿಸಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ದ್ವಿಪಕ್ಷೀಯ ಮಾತುಕತೆ

೩. ಕುಂಭಮೇಳದಲ್ಲಿ ಪ್ರಸಾರ ಭಾರತ ಅಧ್ಯಕ್ಷ ನವನೀತ್ ಸೆಹಗಲ್ ಅಮೃತ ಸ್ನಾನ ನೈನಿ ಅರೆಲ್ ಸಂಗಮ್ ಸೆಕ್ಟರ್ ಗಳಲ್ಲಿ ಆಕಾಶವಾಣಿ ಮತ್ತು ದೂರದರ್ಶನ ಕೇಂದ್ರಗಳ ಪರಿಶೀಲನೆ

೪. ೩೮ನೇ ರಾಷ್ಟ್ರೀಯ ಕ್ರೀಡಾಕೂಟದ ಸಮಾರೋಪ ಸಮಾರಂಭ; ಕೇಂದ್ರ ಸಚಿವ ಅಮಿತ್ ಶಾ ಸೇರಿದಂತೆ ಹಲವು ಗಣ್ಯರ ಉಪಸ್ಥಿತಿ

*****************

ರಾಷ್ಟಪತಿ ದ್ರೌಪದಿ ಮುರ್ಮು ಅವರಿಂದು ಕರ್ನಾಟಕ ಪ್ರವಾಸ ಕೈಗೊಳ್ಳುತ್ತಿದ್ದು, ಬೆಂಗಳೂರಿನ ಆರ್ಟ್ ಆಫ್ ಲಿವಿಂಗ್ ಅಂತಾರಾಷ್ಟ್ರೀಯ ಕೇಂದ್ರದಲ್ಲಿ ಇಂದಿನಿಂದ ಎರಡು ದಿನಗಳ ಕಾಲ ನಡೆಯಲಿರುವ ೧೧ನೇ ಅಂತಾರಾಷ್ಟ್ರೀಯ ಮಹಿಳಾ ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ.

ರಾಷ್ಟಪತಿ ಅವರ ಜೊತೆಗೆ ೧೧೫ ದೇಶಗಳ ರಾಜಕೀಯ, ಉದ್ಯಮ, ಕಲೆ ಮತ್ತು ಸಾಮಾಜಿಕ ವಲಯ ಸೇರಿದಂತೆ ವಿವಿಧ ಕ್ಷೇತ್ರಗಳ ೬ ಸಾವಿರಕ್ಕೂ ಹೆಚ್ಚು ಪ್ರತಿನಿಧಿಗಳು ಈ ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ .

ಆರ್ಟ್ ಆಫ್ ಲಿವಿಂಗ್ ಆಯೋಜಿಸಿರುವ ಈ ಕಾರ್ಯಕ್ರಮದಲ್ಲಿ ೬೦ಕ್ಕೂ ಹೆಚ್ಚು ಭಾಷಣಕಾರರು ಮತ್ತು ೫೦೦ಕ್ಕೂ ಹೆಚ್ಚು ಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ.

ಈ ಸಮ್ಮೇಳನದಲ್ಲಿ ಕರ್ನಾಟಕ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಕೇಂದ್ರ ಸಚಿವೆ ಅನ್ನಪೂರ್ಣ ದೇವಿ, ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ, ಮಾಜಿ ರಾಜ್ಯ ಸಚಿವೆ ಮೀನಾಕ್ಷಿ ಲೇಖಿ, ಕಾಮನ್‌ವೆಲ್ತ್ ಪ್ರಧಾನ ಕಾರ್ಯದರ್ಶಿ ಪೆಟ್ರೀಷಿಯಾ ಸ್ಕಾಟ್ಲೆಂಡ್ ಮತ್ತು ಜಪಾನ್‌ನ ಮಾಜಿ ಪ್ರಧಾನಿ ಶಿಂಜೊ ಅಬೆ ಅವರ ಪತ್ನಿ ಅಕಿ ಅಬೆ ಅವರು ಭಾಗವಹಿಸಲಿದ್ದಾರೆ.

ಈ ಸಮ್ಮೇಳನದಿಂದ ಬರುವ ಆದಾಯವನ್ನು ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಬಳಸಲು ನಿರ್ಧರಿಸಲಾಗಿದೆ.

ನಾಳೆ ರಾಷ್ಟ್ರಪತಿ ಜಾರ್ಖಂಡ್‌ಗೆ ತೆರಳಲಿದ್ದು, ರಾಂಚಿಯಲ್ಲಿರುವ ಬಿಐಟಿ ಮೆಸ್ರಾ ಸಂಸ್ಥೆಯ ಪ್ಲಾಟಿನಂ ಜುಬಿಲಿ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಲಿದ್ದಾರೆ.

*****************

ಪ್ರಧಾನಿ ನರೇಂದ್ರ ಮೋದಿ ಅಮೆರಿಕಾದ ವಾಷಿಂಗ್ಟನ್ ಡಿಸಿಯ ಶ್ವೇತಭವನದಲ್ಲಿ ನಿನ್ನೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು. ತಮ್ಮ ಹೇಳಿಕೆಯಲ್ಲಿ ಪ್ರಧಾನಿ, ತಾವು ಮತ್ತು ಅಧ್ಯಕ್ಷ ಡೊನಾಲ್ಡ್ ಟ್ರಂಪ್

ಭಾರತ-ಅಮೆರಿಕಾ ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಪಡಿಸುವ ಬದ್ಧತೆಯನ್ನು ಪುನರುಚ್ಚರಿಸಿದರು. ಸಂಬಂಧವನ್ನು ಸಮಗ್ರವಾಗಿಸಲು ಅಮೆರಿಕಾ ಅಧ್ಯಕ್ಷರು ಕೊಡುಗೆ ನೀಡಿದ್ದಾರೆ ಎಂದು ಅವರು ಹೇಳಿದರು.

ಇದೇ ವೇಳೆ ಟೆಕ್ಸಾಸ್‌ನಲ್ಲಿ ನಡೆದ ಹೌಡಿ ಮೋದಿ ಕಾರ್ಯಕ್ರಮ ಮತ್ತು ಗುಜರಾತ್‌ನಲ್ಲಿ ನಡೆದ ನಮಸ್ತೆ ಟ್ರಂಪ್ ಕಾರ್ಯಕ್ರಮವನ್ನು ಪ್ರಧಾನಿ ನೆನಪಿಸಿಕೊಂಡರು. ಅಮೆರಿಕ ಅಧ್ಯಕ್ಷೀಯ ಚುನಾವಣೆಯ ಐತಿಹಾಸಿಕ ವಿಜಯಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷ ಟ್ರಂಪ್ ಅವರನ್ನು ಅಭಿನಂದಿಸಿದರು. ಪರಸ್ಪರ ಸಹಕಾರದೊಂದಿಗೆ ಉಭಯ ರಾಷ್ಟ್ರಗಳು ಒಟ್ಟಾಗಿ ಪ್ರಗತಿ ಮತ್ತು ಸಮೃದ್ಧಿಯತ್ತ ಸಾಗಲಿವೆ. ಇದು ಯುದ್ಧದ ಯುಗವಲ್ಲ ಬದಲಾಗಿ ಸಮಸ್ಯೆಗಳನ್ನು ರಾಜತಾಂತ್ರಿಕತೆಯಿಂದ ಪರಿಹರಿಸಬೇಕು ಎಂದು ಅವರು ಹೇಳಿದರು.

ಶಾಂತಿಯ ಮರು ಸ್ಥಾಪನೆಗೆ ಅಧ್ಯಕ್ಷ ಟ್ರಂಪ್ ಕೈಗೊಳ್ಳುತ್ತಿರುವ ಕುರಿತು ಶ್ಲಾಘನೆ ವ್ಯಕ್ತಪಡಿಸಿದ ಪ್ರಧಾನಿ, ಈ ವಿಷಯದಲ್ಲಿ ಭಾರತ ತಟಸ್ಥ ದೇಶ ಎಂದು ಜಗತ್ತು ಭಾವಿಸುತ್ತದೆ ಆದರೆ ಭಾರತ ತಟಸ್ಥವಾಗಿಲ್ಲ, ಅದು ಶಾಂತಿಯ ಪರವಾಗಿದೆ ಎಂದು ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ಒಬ್ಬ ಮಹಾನ್ ನಾಯಕರಾಗಿದ್ದು, ಅವರೊಂದಿಗೆ ಸುಮಾರು ವರ್ಷಗಳಿಂದ ಗೆಳೆತನವಿದೆ ಎಂದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಮ್ಮ ಹೇಳಿಕೆಗಳಲ್ಲಿ, ಭಾರತ, ಅಮೆರಿಕದಿಂದ ತೈಲ ಮತ್ತು ಅನಿಲವನ್ನು ಖರೀದಿಸಲಿದೆ ಎಂದು ತಿಳಿಸಿದರು. ಅಧ್ಯಕ್ಷ ಟ್ರಂಪ್ ಅವರ ಎರಡನೇ ಅಧ್ಯಕ್ಷೀಯ ಅವಧಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಅಮೆರಿಕಕ್ಕೆ ನೀಡುತ್ತಿರುವ ಮೊದಲ ಭೇಟಿ ಇದಾಗಿದೆ.

ಈ ನಡುವೆ, ಪ್ರಧಾನಿ ನರೇಂದ್ರ ಮೋದಿ ಅಮೆರಿಕಾ ರಾಷ್ಟ್ರೀಯ ಭದ್ರತಾ ಸಲಹೆಗಾರ ಮೈಕಲ್ ವಾಲ್ಟ್ಸ್ ಅವರೊಂದಿಗೆ ಸಭೆ ನಡೆಸಿದರು. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಸಂದೇಶ ಹಂಚಿಕೊಂಡಿರುವ ಅವರು, ರಕ್ಷಣೆ, ತಂತ್ರಜ್ಞಾನ ಮತ್ತು ಭದ್ರತೆ ಭಾರತ-ಅಮೆರಿಕಾ ಸಂಬಂಧಗಳ ಪ್ರಮುಖ ಅಂಶಗಳಾಗಿವೆ. ಈ ವಿಷಯಗಳ ಸುತ್ತಮುತ್ತ ಸಭೆಯಲ್ಲಿ ಚರ್ಚೆ ನಡೆದಿದೆ.

ಇದರ ಜೊತೆಗೆ ಪ್ರಧಾನಿ ಟೆಸ್ಲಾ ಮತ್ತು ಸ್ಪೇಸ್ ಎಕ್ಸ್ ಸಂಸ್ಥೆಗಳ ಸಿಇಒ ಎಲಾನ್ ಮಸ್ಕ್ ಅವರನ್ನು ವಾಷಿಂಗ್ಟನ್ ಡಿಸಿಯಲ್ಲಿ ನಿನ್ನೆ ಭೇಟಿಯಾದರು.

******************

ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಕುಂಭಮೇಳದಲ್ಲಿರುವ  ಕುಂಭವಾಣಿ ಕೇಂದ್ರದಲ್ಲಿ ಮಹಾಕುಂಭದ ಪ್ರಸಾರವು ಪ್ರಸಾರ ಭಾರತಿಯ ನಿಖರವಾದ  ಮತ್ತು ವಿಶ್ವಾಸಾರ್ಹ ಮಾಹಿತಿಯನ್ನು ನೀಡುವ ಉದ್ದೇಶವನ್ನು ಪ್ರತಿಬಿಂಬಿಸುತ್ತದೆ ಎಂದು ಪ್ರಸಾರ ಭಾರತಿ ಅಧ್ಯಕ್ಷ ನವನೀತ್ ಸೆಹಗಲ್ ಹೇಳಿದ್ದಾರೆ.

ನಿನ್ನೆ ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದ ನಂತರ ಪ್ರಯಾಗರಾಜ್‌ನ ಕುಂಭವಾಣಿ ರೇಡಿಯೋ ಕೇಂದ್ರದಲ್ಲಿ ನಡೆದ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಅವರು ಈ ವಿಷಯವನ್ನು ಶ್ಲಾಘಿಸಿದ್ದಾರೆ ಹಾಗೂ  ಮಹಾಕುಂಭದ ನೇರ ಮತ್ತು ವಿಶ್ವಾಸಾರ್ಹ ಪ್ರಸಾರಕ್ಕಾಗಿ ಇದು ಪ್ರಮುಖ ಕೇಂದ್ರವಾಗಿ ಹೊರಹೊಮ್ಮಿದೆ ಎಂದು ಹೇಳಿದರು.

ನೈನಿ ಅರೆಲ್ ಸಂಗಮ ಸೆಕ್ಟರ್ ೪ ರಲ್ಲಿ ನಿರ್ಮಿಸಲಾದ ಆಕಾಶವಾಣಿ ಮತ್ತು ದೂರದರ್ಶನ ಕೇಂದ್ರ ಸ್ಟುಡಿಯೋಗಳನ್ನು ಸೆಹಗಲ್ ಪರಿಶೀಲಿಸಿದರು. ಆಕಾಶವಾಣಿ, ಕುಂಭವಾಣಿ, ದೂರದರ್ಶನ ಮತ್ತು ವೇವ್ಸ್ ಒಟಿಟಿ ಮೂಲಕ ಪ್ರಸಾರ ಭಾರತಿ ಸುಮಾರು ೭೫ ಕೋಟಿಯಿಂದ  - ೧೦೦ ಕೋಟಿ ಜನರನ್ನು ತಲುಪಿದೆ ಎಂದು ಅವರು ತಿಳಿಸಿದರು.

ಧ್ವನಿ: ನವನೀತ್ ಸೆಹಗಲ್

ಭವಿಷ್ಯದಲ್ಲಿಯೂ ಇಂತಹ ನಾವೀನ್ಯತೆಗಳು ಮುಂದುವರಿಯಬೇಕು, ಇದರಿಂದ ಹೆಚ್ಚು ಜನರು ಸಮೂಹ ಸಂವಹನದ ಮೂಲಕ ಪ್ರಯೋಜನ ಪಡೆಯಬಹುದು ಎಂದು ಸೆಹಗಲ್ ಹೇಳಿದರು.

ಮಾಹಿತಿ ಸಂವಹನವನ್ನು ಅಡೆತಡೆಯಿಲ್ಲದೆ ಮುಂದುವರೆಸಲು ಅತ್ಯಾಧುನಿಕ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳಬೇಕು, ಇದರಿಂದ ಮಹಾ ಕುಂಭದ ಪ್ರತಿಯೊಂದು ಪ್ರಮುಖ ಚಟುವಟಿಕೆಯು ದೇಶ ಮತ್ತು ವಿದೇಶಗಳ ಭಕ್ತರನ್ನು ಸುಲಭವಾಗಿ ತಲುಪಬಹುದು ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

*****************

ಕೇಂದ್ರ ಸರ್ಕಾರ ಕಳೆದ ೫ ವರ್ಷಗಳಲ್ಲಿ ಜಮ್ಮು ಮತ್ತು ಕಾಶ್ಮೀರದಲ್ಲಿ ರಾಷ್ಟ್ರೀಯ ಹೆದ್ದಾರಿಗಳ ಅಭಿವೃದ್ಧಿ ಮತ್ತು ನಿರ್ವಹಣೆಗಾಗಿ ೧೯ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಖರ್ಚು ಮಾಡಿದೆ ಮತ್ತು ಕೇಂದ್ರಾಡಳಿತ ಪ್ರದೇಶದಲ್ಲಿ ೧ ಸಾವಿರ ಕಿ.ಮೀ.ಗೂ ಹೆಚ್ಚು ರಸ್ತೆಗಳನ್ನು ನಿರ್ಮಿಸಿದೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಮಾಹಿತಿ ನೀಡಿದ್ದಾರೆ.

ಜಮ್ಮು ಮತ್ತು ಕಾಶ್ಮೀರದಾದ್ಯಂತ ರಾಷ್ಟ್ರೀಯ ಹೆದ್ದಾರಿಗಳ ಅಭಿವೃದ್ಧಿ ಮತ್ತು ನಿರ್ವಹಣೆಗಾಗಿ ೧೯ ಸಾವಿರದ ೯೦೩ ಕೋಟಿ ರೂ.ಗಳನ್ನು ಖರ್ಚು ಮಾಡಲಾಗಿದೆ ಮತ್ತು ಕಳೆದ ಐದು ವರ್ಷಗಳಲ್ಲಿ ಕೇಂದ್ರಾಡಳಿತ ಪ್ರದೇಶದಲ್ಲಿ ೧ ಸಾವಿರದ ೩ ಕಿ.ಮೀ. ರಸ್ತೆಗಳನ್ನು ನಿರ್ಮಿಸಲಾಗಿದೆ ಎಂದು ಸಂಸತ್ತಿಗೆ ತಿಳಿಸಿದ್ದಾರೆ.

ಹೆದ್ದಾರಿಗಳ ಚತುಷ್ಪಥ ಮತ್ತು ಅನೇಕ ಸುರಂಗಗಳ ನಿರ್ಮಾಣ ಸೇರಿದಂತೆ ಹಲವಾರು ಮಹತ್ವಾಕಾಂಕ್ಷೆಯ ಯೋಜನೆಗಳು ಜಮ್ಮು ಮತ್ತು ಕಾಶ್ಮೀರದಲ್ಲಿ ರಸ್ತೆ ಜಾಲಗಳನ್ನು ಆಧುನೀಕರಿಸುವ ನಿರಂತರ ಪ್ರಯತ್ನದ ಭಾಗವಾಗಿದೆ ಎಂದು ಕೇಂದ್ರ ಸಚಿವರು ಸಂಸತ್ತಿಗೆ ಮಾಹಿತಿ ನೀಡಿದರು.

ಮೂಲಸೌಕರ್ಯದಲ್ಲಿ ನಿರಂತರ ಹೂಡಿಕೆಗಳೊಂದಿಗೆ, ಕೇಂದ್ರ ಸರ್ಕಾರವು ಜಮ್ಮು ಮತ್ತು ಕಾಶ್ಮೀರದಲ್ಲಿ ಹೆದ್ದಾರಿ ನಿರ್ಮಾಣವನ್ನು ವೇಗಗೊಳಿಸಲು ಸಜ್ಜಾಗಿದೆ ಮತ್ತು ಪ್ರಯಾಣವನ್ನು ಸುರಕ್ಷಿತ ಮತ್ತು ಹೆಚ್ಚು ಪರಿಣಾಮಕಾರಿಯಾಗಿಸುವತ್ತ ಗಮನ ಹರಿಸಲಾಗಿದೆ, ಜೊತೆಗೆ ಇದು ಆರ್ಥಿಕ ಬೆಳವಣಿಗೆ ಮತ್ತು ಪ್ರಾದೇಶಿಕ ಅಭಿವೃದ್ಧಿಯನ್ನು ಬೆಂಬಲಿಸುತ್ತದೆ ಎಂದು ಸಚಿವರು ಹೇಳಿದರು.

******************

ರಾಜ್ಯಗಳಲ್ಲಿ ಪಂಚಾಯಿತಿಗಳ ವಿಕೇಂದ್ರೀಕರಣದ ಸ್ಥಿತಿ - ಸೂಚಕ ಸಾಕ್ಷ್ಯಾಧಾರಿತ ಶ್ರೇಯಾಂಕ, ೨೦೨೪' ಎಂಬ ಶೀರ್ಷಿಕೆಯ ವಿಕೇಂದ್ರೀಕರಣ ಸೂಚ್ಯಂಕ ವರದಿಯನ್ನು ನವದೆಹಲಿಯಲ್ಲಿ ನಿನ್ನೆ ಪಂಚಾಯತ್ ರಾಜ್ ಖಾತೆ ರಾಜ್ಯ ಸಚಿವ ಪ್ರೊಫೆಸರ್ ಎಸ್.ಪಿ. ಸಿಂಗ್ ಬಘೇಲ್ ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ವರದಿಯು ಚೌಕಟ್ಟು, ಕಾರ್ಯಗಳು, ಹಣಕಾಸು, ಕಾರ್ಯನಿರ್ವಾಹಕರು, ಸಾಮರ್ಥ್ಯ ವೃದ್ಧಿ ಮತ್ತು ಜವಾಬ್ದಾರಿ ಎಂಬ ಪಂಚಾಯತ್‌ಗಳ ಆರು ನಿರ್ಣಾಯಕ ಆಯಾಮಗಳನ್ನು ಮೌಲ್ಯಮಾಪನ ಮಾಡುತ್ತದೆ. ಪಂಚಾಯಿತಿಗಳು ಪ್ರಜಾಪ್ರಭುತ್ವದ ಬಲಿಷ್ಠ ಸಂಸ್ಥೆಗಳು ಎಂದು ಹೇಳಿದರು.

ಈ ಸೂಚ್ಯಂಕ ವರದಿಯು ದೇಶದ ವಿವಿಧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ವಿಕೇಂದ್ರೀಕರಣದ ಪ್ರಗತಿಯ ಬಗ್ಗೆ ಒಳನೋಟಗಳನ್ನು ಒದಗಿಸುತ್ತದೆ. ಸ್ವಾಯತ್ತ ಪಂಚಾಯಿತಿಗಳ ಸ್ವತಂತ್ರ ನಿರ್ಧಾರಗಳನ್ನು ತೆಗೆದುಕೊಳ್ಳುವ ಮತ್ತು ಅನುಷ್ಠಾನಗೊಳಿಸುವ ಸಾಮರ್ಥ್ಯವನ್ನು ಈ ವರದಿ ಪರಿಶೀಲಿಸುತ್ತದೆ. ಇದಲ್ಲದೆ, ವಿಕೇಂದ್ರೀಕರಣ ಸೂಚ್ಯಂಕ ವರದಿಯು ಸಹಕಾರಿ ಒಕ್ಕೂಟ ಮತ್ತು ಸ್ಥಳೀಯ ಸ್ವ-ಆಡಳಿತವನ್ನು ಬಲಪಡಿಸುವ ಸಾಧನವಾಗಿ ಕಾರ್ಯನಿರ್ವಹಿಸುತ್ತದೆ.

******************

ತಮ್ಮ ಬಿಹಾರದ ಭಾಗಲ್ಪುರ ಭೇಟಿಯ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಈ ಪ್ರದೇಶಕ್ಕೆ ೨ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಮೌಲ್ಯದ ಅಭಿವೃದ್ಧಿ ಯೋಜನೆಗಳನ್ನು ಅನಾವರಣಗೊಳಿಸಲಿದ್ದಾರೆ ಎಂದು ರಾಜ್ಯ ನಗರಾಭಿವೃದ್ಧಿ ಸಚಿವ ನಿತಿನ್ ನಬಿನ್ ಹೇಳಿದ್ದಾರೆ.

ಫೆಬ್ರವರಿ ೨೪ ರಂದು ನಡೆಯಲಿರುವ ಕಿಸಾನ್ ಸಭೆಯಲ್ಲಿ ಬೃಹತ್ ಘೋಷಣೆಯನ್ನು ನಿರೀಕ್ಷಿಸಲಾಗಿದೆ ಹಾಗೂ ಈ ವೇದಿಕೆಯಲ್ಲಿ ಪ್ರಧಾನಿ ಮೋದಿ ಅವರು  ವಿವಿಧ ಕಲ್ಯಾಣ ಯೋಜನೆಗಳನ್ನು ಘೋಷಣೆ ಮಾಡಲಿದ್ದಾರೆ ಎಂದು ಅವರು ಹೇಳಿದ್ದಾರೆ.

ಈ ವರ್ಷದ ಬಜೆಟ್‌ನಲ್ಲಿ ಬಿಹಾರಕ್ಕೆ "ವಿಶೇಷ ಉಡುಗೊರೆ" ದೊರೆತಿದೆ. ಇದು ರಾಜ್ಯದ ಅಭಿವೃದ್ಧಿಗೆ ಸರ್ಕಾರದ ಬದ್ಧತೆಯನ್ನು ಬಲಪಡಿಸುತ್ತದೆ ಎಂದು ನಬಿನ್ ಹೇಳಿದರು, ಪ್ರಧಾನಿ ಮೋದಿಯವರ ಬಿಹಾರ ಭೇಟಿಯು ವಿಶೇಷವಾಗಿ ಮುಂಬರುವ ವಿಧಾನಸಭಾ ಚುನಾವಣೆಗಳು ನಡೆಯಲಿರುವ ಹಿನ್ನೆಲೆಯಲ್ಲಿ, ರಾಜಕೀಯ ಮತ್ತು ಅಭಿವೃದ್ಧಿಯ ದೃಷ್ಟಿಯಲ್ಲಿ ಮಹತ್ವ ಪಡೆದಿದೆ.

******************

ಉತ್ತರಾಖಂಡದ ಹಲ್ದ್ವಾನಿಯಲ್ಲಿ ಇಂದು ನಡೆಯಲಿರುವ ೩೮ನೇ ರಾಷ್ಟ್ರೀಯ ಕ್ರೀಡಾಕೂಟದ ಸಮಾರೋಪ ಸಮಾರಂಭದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಭಾಗವಹಿಸಲಿದ್ದಾರೆ.

ಈ ಕ್ರೀಡಾಕೂಟವನ್ನು ಕಳೆದ ಜನವರಿ ೨೮ ರಂದು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಿದರು. ಕ್ರೀಡಾಕೂಟದ ಭಾಗವಾಗಿ ೩೫ ಕ್ರೀಡೆಗಳು ಡೆಹರಾಡೂನ್, ಹಲ್ದ್ವಾನಿ, ಹರಿದ್ವಾರ ಮತ್ತು ರುಧ್ರಪುರ್‌ನಲ್ಲಿ ನಡೆದವು.

ಇಂದು ನಡೆಯಲಿರುವ ಸಮಾರೋಪ ಸಮಾರಂಭದಲ್ಲಿ ಗೃಹ ಸಚಿವರೊಂದಿಗೆ ಕೇಂದ್ರ ಕ್ರೀಡಾ ಸಚಿವ ಮನ್ಸುಖ್ ಮಾಂಡವೀಯ ಉತ್ತರಾಖಂಡ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ, ಮೇಘಾಲಯ ಮುಖ್ಯಮಂತ್ರಿ ಕೊಂಗ್‌ಕಾಲ್ ಸಂಗ್‌ಮಾ ರೆಸ್ತೆ ಮತ್ತು ಸಾರಿಗೆ ಸಚಿವ ಅಜಯ್ ಟಮ್ಮಟಾ, ಭಾರತೀಯ ಒಲಿಂಪಿಕ್ ಸಂಸ್ಥೆಯ ಅಧ್ಯಕ್ಷ ಹಾಗೂ ಸಂಸದೆ ಪಿ.ಟಿ.ಉಷಾ ಸೇರಿದಂತೆ ಹಲವರು ಪಾಲ್ಗೊಳ್ಳಲಿದ್ದಾರೆ.

*********ಮುಕ್ತಾಯ*********